-- ಓ.ಎಸ್ ನಂಬರ್ಃ195/2015

ಪಿಡಬ್ಲ್ಯೂಃ 03

ಇಂದು ದಿನಾಂಕಃ.15.03.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಪಾಟೀ ಸವಾಲುಃ** ಪ್ರತಿ ವಾದಿಯ ಪರ ಶ್ರೀ ಬಿ ಎಂ ಹೆಚ್ ವಕೀಲರಿಂದಃ

ನಾನು ಮಾಸೂರು ಗ್ರಾಮ ಪಂಚಾಯಿತಿ ಪಿ.ಡಿ.ಒ. ಆಗಿ 1 ವರ್ಷದಿಂದ ಕಾರ್ಯನಿರ್ವಹಿಸುತ್ತಿದ್ದೇನೆ. ಪಂಚಾಯಿತಿ ಅಭಿವೃದ್ದಿ ಅಧಿಕಾರಿ ಎಂಬ ಹುದ್ದೆ 2010 ರಿಂದ ಬಂದಿದೆ. ಅದಕ್ಕಿಂತ ಮುಂಚೆ ಕಾರ್ಯದರ್ಶಿ ಎಂಬ ಹುದ್ದೆ ಇತ್ತು. ಪ್ರತಿವಾದಿ 1 ರವರು ವಾದಿ 1 ರವರ ಮೇಲೆ ಅಸಲು ದಾವಾ ಸಂಖ್ಯೆ 60/2005 ನ್ನು ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಹೂಡಿದ್ದರು ಎಂದರೆ ನನಗೆ ಗೊತ್ತಿಲ್ಲ. ಸದರಿ ದಾವೆಯಲ್ಲಿ ಗುರುತಿಸಲಾದ ಹಕ್ಕುಪತ್ರವನ್ನು ಸಾಕ್ಷಿಗೆ ಎದುರು ತೋರಿಸಲಾಗಿ ಸಾಕ್ಷಿಯು ಗುರುತಿಸಿದ್ದು ಅದನ್ನು ನಿಡಿ-1 ಎಂದು ಗುರುತಿಸಲಾಯಿತು. ಸದರಿ ದಾವೆಯಲ್ಲಿ ಪ್ರತಿವಾದಿ1 ಮತ್ತು 2 ರವರ ಪರವಾಗಿ ಡಿಕ್ರಿ ಆಯಿತು ಎಂದರೆ ನನಗೆ ಗೊತ್ತಿಲ್ಲ. ಸದರಿ ದಾವೆಯಲ್ಲಿ ಪಂಚಾಯತಿ ಕಾರ್ಯದರ್ಶಿ ಮಾಸೂರು ರವರು ಹಾಜರಾಗಿ ವಕೀಲರನ್ನು ನೇಮಿಸಿ ತಕರಾರು ಸಲ್ಲಿಸಿದ್ದರು ಎಂದರೆ ನನಗೆ ಗೊತ್ತಿಲ್ಲ. ಸದರಿ ಆಸ್ತಿಗೆ ಸಂಬಂಧಪಟ್ಟ ದಾಖಲೆಗಳನ್ನು ನಾನು ಪರಿಶೀಲಿಸಿರುತ್ತೇನೆ. ಪರಿಶೀಲನೆ ಕಾಲದಲ್ಲಿ ದಾವಾ ಸಂಖ್ಯೆ60/2005 ಕ್ಕೆ ಸಂಬಂಧಪಟ್ಟ ಯಾವುದೇ ದಾಖಲೆ ಕಂಡುಬಂದಿಲ್ಲ. ಪ್ರತಿವಾದಿ 1 ಮತ್ತು 2 ರವರು ಸದರಿ ದಾವೆಯ ಆದೇಶವನ್ನು ನಮ್ಮ ಕಚೇರಿಗೆ ಹಾಜರುಪಡಿಸಿರುತ್ತಾರೆ ಎಂದರೆ ಗೊತ್ತಿಲ್ಲ. ಆ ಪ್ರಕಾರ ಪ್ರತಿವಾದಿ 1 ಮತ್ತು 2 ರವರ ಹೆಸರು ಪಂಚಾಯಿತಿ ಆಸ್ತಿ 1441 ಕ್ಕೆ ಖಾತೆ ಆಗಿದೆ ಎಂದರೆ ಸರಿ. ಸದರಿ ಆಸ್ತಿಗೆ ಪ್ರತಿವಾದಿಯವರು ಕಂದಾಯ ಪಾವತಿ ಮಾಡಿದ್ದಾರೆ ಎಂದರೆ ಸರಿ. ಪಂಚಾಯಿತಿ ತಪ್ಪು ಇರುವ ಕಾರಣ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಯರ ವಿಪಿಸಿ ನಂಃ1441ಕ್ಕೆ ನ್ಯಾಯಾಲಯದ ಆದೇಶದಂತೆ ಮಾಲೀಕರು ಎಂದರೆ ನನಗೆ ಗೊತ್ತಿಲ್ಲ. ವಾದಿಯು ಪ್ರತಿವಾದಿಯವರಿಗೆ ತೊಂದರೆ ಕೊಡಲು ಸದರಿ ದಾವೆ ಮಾಡಿರುತ್ತಾರೆ ಎಂದರೆ ಗೊತ್ತಿಲ್ಲ. ನಾನು ದಾವಾ ಆಸ್ತಿಗೆ ಸಂಬಂಧಿಸಿದಂತೆ ಪಂಚನಾಮೆ ಮಾಡಿಲ್ಲ. ವಾದಿಯವರ ಮಾತು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.